ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ:68: ಪ್ರಭಾರ:2023-24:ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 01.01.2024.

ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಭಾರ ಪ್ರಾಂಶುಪಾಲರ ವಹಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ಸಂಖ್ಯೆ ಡಿಸಿಇ: ಟಿಆರ್‌ಎನ್:ಐಎನ್‌ಸಿ:72:2023:ಟಿಡಿಜಿ ದಿನಾಂಕ:10.10.2023

***

ಉಲ್ಲೇಖಿತ ಸೂತ್ತೊಲೆಯಲ್ಲಿ ಸೂಚಿಸಿರುವ ಮಾರ್ಗಸೂಚಿಗಳನ್ನು ಮುಂದುವರೆಸುತ್ತಾ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಭಾರ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರುಗಳು ನಿವೃತ್ತಿ, ವರ್ಗಾವಣೆ, ಇತ್ಯಾದಿ ಸಂದರ್ಭದಲ್ಲಿ ಪ್ರಾಂಶುಪಾಲರ ಪ್ರಭಾರದಿಂದ ಬಿಡುಗಡೆ ಹೊಂದುವಾಗ ಪ್ರಾಂಶುಪಾಲರ ಪ್ರಭಾರವನ್ನು ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರಿಗೆ ಕಡ್ಡಾಯವಾಗಿ ವಹಿಸಲು ಸೂಚಿಸಿದೆ. ಒಂದು ವೇಳೆ ಸದರಿಯವರು ಪ್ರಾಂಶುಪಾಲರ ಪ್ರಭಾರ ವಹಿಸಿಕೊಳ್ಳಲು ನಿರಾಕರಿಸಿದಲ್ಲಿ ಅವರಿಂದ ಲಿಖಿತವಾಗಿ ನಿರಾಕರಣೆ ಲಿಖಿತ ರೂಪದಲ್ಲಿ ಪಡೆದು ನಂತರದ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರಿಗೆ ವಹಿಸಲು ಸೂಚಿಸಿದೆ

ಮೇಲಿನ ಪ್ರಕರಣಗಳನ್ನು ಹೊರತುಪಡಿಸಿ ಸೇವಾ ಜೇಷ್ಠತೆ ಹೊಂದಿರುವ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರು ಇವರ ವಿರುದ್ಧ ಗುರುತರ ದೂರು, ಆಡಳಿತವನ್ನು ಸಮರ್ಪಕವಾಗಿ ನಡೆಸಲು ಸಮರ್ಥರಾಗಿಲ್ಲವೆಂದು ಕಂಡುಬಂದಲ್ಲಿ ಹಾಗೂ ಅಂತಹ ಸಂದರ್ಭದಲ್ಲಿ ಕೇಂದ್ರ ಕಛೇರಿಯಿಂದಲೆ ಪ್ರಭಾರ ವಹಿಸಿಕೊಳ್ಳುವ ಆದೇಶ ನೀಡಲಾಗುವುದು. ಇಂತಹ ಪ್ರಕರಣದಲ್ಲಿ ಸದರಿ ಬೋಧಕರು ಪ್ರಭಾರ ವಹಿಸಿಕೊಡದಿದ್ದಲ್ಲಿ ಅವರ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳಲು ಕೇಂದ್ರ ಕಛೇರಿಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದೆ.

(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ

ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ ಮಂಗಳೂರು/ ಧಾರವಾಡ/ಶಿವಮೊಗ್ಗ/ಕಲಬುರಗಿ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು

1. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಎಲ್ಲಾ ಪ್ರಾಂಶುಪಾಲರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಸಹಾಯಕ ನಿರ್ದೇಶಕರು, ತನಿಖಾ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಪ್ರತಿ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು. ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.